**Akashvani : Bangalore**
**Regional Bulletin In Kannada**
**30.08.2026 / 18.40 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

೧. ರಾಜ್ಯದ ರೈಲ್ವೆ ವಿದ್ಯುದೀಕರಣ ಕಾರ್ಯ ವರ್ಷಾಂತ್ಯದೊಳಗೆ ಪೂರ್ಣ - ಕೇಂದ್ರ ಸಚಿವ ವಿ.ಸೋಮಣ್ಣ

೨. ಗೃಹಲಕ್ಷ್ಮಿ ಯೋಜನೆ ; ಕುಟುಂಬದ ಅಗತ್ಯಗಳ ನಿರ್ವಹಣೆಗೆ ಮಹಿಳೆಯರಿಂದ ನೆರವಿನ ಬಳಕೆ - ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

೩. ಪಿಎಂ ಸ್ವನಿಧಿಯಿಂದ ಆರ್ಥಿಕ ಸ್ವಾವಲಂಬನೆ ; ಮನದ ಮಾತಿನಲ್ಲಿ ಪ್ರಧಾನಿ ಪ್ರಸ್ತಾಪ ; ಫಲಾನುಭವಿ ನಿಂಗಮ್ಮ ಸಂತಸ

೪. ಸಚಿವ ಸ್ಥಾನಕ್ಕೆ ಬಿ.ನಾಗೇಂದ್ರ ರಾಜೀನಾಮೆ ; ರಾಜ್ಯಪಾಲರ ಅಂಗೀಕಾರ

೫. ಮೈಸೂರು ದಸರಾ ಸಿದ್ಧತೆ ; ಗಜಪಡೆ ತೂಕ ಪರೀಕ್ಷೆ ನಂತರ ತಾಲೀಮು ಆರಂಭ

---

ರಾಜ್ಯದಲ್ಲಿ ರೈಲ್ವೆ ವಿದ್ಯುದೀಕರಣ ಕಾರ್ಯವನ್ನು ಈ ವರ್ಷಾಂತ್ಯದ ಒಳಗೆ ಪೂರ್ಣಗೊಳಿಸಲಾಗುವುದು ಎಂದು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಹೇಳಿದ್ದಾರೆ.

ಅವರು, ಚಿತ್ರದುರ್ಗ ನಗರದ ರೈಲ್ವೆ ನಿಲ್ದಾಣದ ಬಳಿ ಸುಮಾರು ಮೂವತ್ತೆರಡುವರೆ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗಲಿರುವ ಲೆವೆಲ್ ಕ್ರಾಸಿಂಗ್ ಮೇಲ್ಸೇತುವೆ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.

ಕರ್ನಾಟಕದಲ್ಲಿ ರೈಲ್ವೆ ಮೂಲಸೌಕರ್ಯ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರ ೫೨ ಸಾವಿರ ಕೋಟಿ ರೂಪಾಯಿ ಹಣ ನೀಡಿದೆ. ಚಿತ್ರದುರ್ಗ ಜಿಲ್ಲೆಯಲ್ಲಿ ಮುಂದಿನ ೧೦ ತಿಂಗಳಲ್ಲಿ ಒಟ್ಟು ೩೩ ರೈಲ್ವೆ ಮೇಲ್ಸೇತುವೆ ಹಾಗೂ ಕೆಳಸೇತುವೆ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ಎಂದು ಹೇಳಿದರು.

ತುಮಕೂರು, ಚಿತ್ರದುರ್ಗ, ದಾವಣಗೆರೆ ನೂತನ ರೈಲ್ವೆ ಮಾರ್ಗ ಕಾಮಗಾರಿಯನ್ನು ಮುಂದಿನ ಒಂದೂವರೆ ವರ್ಷದಲ್ಲಿ ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ. ಈ ಮಾರ್ಗದಿಂದ ಬೆಂಗಳೂರಿಗೆ ಪ್ರಯಾಣಿಸುವ ಅವಧಿಯಲ್ಲಿ ಒಂದೂವರೆ ಗಂಟೆ ಸಮಯ ಹಾಗೂ ៦೦ ಕಿಲೋಮೀಟರ್‌ಗೂ ಹೆಚ್ಚು ದೂರ ಉಳಿತಾಯವಾಗಲಿದೆ ಎಂದು ಸಚಿವರು ತಿಳಿಸಿದರು.

ಮೂರು ಸಾವಿರದ ೩೪೦ ಕೋಟಿ ರೂಪಾಯಿ ವೆಚ್ಚದ ಬಳ್ಳಾರಿ, ಚಿಕ್ಕಜಾಜೂರು, ೧೮೦ ಕಿಲೋಮೀಟರ್ ಜೋಡಿ ರೈಲ್ವೆ ಮಾರ್ಗ ಕಾಮಗಾರಿ ಟೆಂಡರ್ ಹಂತದಲ್ಲಿ ಇದೆ ಎಂದು ಸೋಮಣ್ಣ ವಿವರಿಸಿದರು.

ಜಲಜೀವನ್ ಮಿಷನ್ ಮೂಲಕ ದೇಶದ ೧೯ ಕೋಟಿ ಗ್ರಾಮೀಣ ಕುಟುಂಬಗಳಿಗೆ ಕುಡಿಯುವ ನೀರಿನ ನಲ್ಲಿ ಸಂಪರ್ಕ ಕಲ್ಪಿಸಲಾಗಿದೆ. ಚಿತ್ರದುರ್ಗದ ಭದ್ರಾ ಮೇಲ್ದಂಡೆ ಯೋಜನೆ ಸೇರಿದಂತೆ ಪ್ರಮುಖ ನೀರಾವರಿ ಯೋಜನೆಗಳನ್ನು ಆದ್ಯತೆ ಮೇರೆಗೆ ಪೂರ್ತಿಗೊಳಿಸಲಾಗುವುದು ಎಂದು ಸಚಿವ ಸೋಮಣ್ಣ ಸ್ಪಷ್ಟಪಡಿಸಿದರು. ಕಾರ್ಯಕ್ರಮದಲ್ಲಿ ಸಂಸದ ಗೋವಿಂದ ಕಾರಜೋಳ, ಶಾಸಕ ವೀರೇಂದ್ರ ಪಪ್ಪಿ ಉಪಸ್ಥಿತರಿದ್ದರು.

---

ಗೃಹಲಕ್ಷ್ಮಿ ಯೋಜನೆಯ ನೆರವನ್ನು ಬಹುತೇಕ ಫಲಾನುಭವಿಗಳು ತಮ್ಮ ಕುಟುಂಬದ ಅಗತ್ಯಗಳನ್ನು ಪೂರೈಸಿಕೊಳ್ಳಲು ಬಳಸುತ್ತಿದ್ದಾರೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

ಅವರು, ಗೃಹಲಕ್ಷ್ಮಿ ಯೋಜನೆಗೆ ಮೂರು ವರ್ಷ ತುಂಬಿದ ಸಂದರ್ಭದಲ್ಲಿಂದು ನೀಡಿದ ಸಂದೇಶದಲ್ಲಿ ಯೋಜನೆಯಡಿ ಇದುವರೆಗೆ ៦៦ ಸಾವಿರದ ೫೦೦ ಕೋಟಿ ರೂಪಾಯಿಗೂ ಅಧಿಕ ಆರ್ಥಿಕ ನೆರವನ್ನು ನೇರವಾಗಿ ಮಹಿಳೆಯರ ಖಾತೆಗೆ ವರ್ಗಾಯಿಸಲಾಗಿದೆ. ಒಂದು ಕೋಟಿ ೨೦ ಲಕ್ಷಕ್ಕೂ ಅಧಿಕ ಮಹಿಳೆಯರು ಯೋಜನೆಯ ಫಲಾನುಭವಿಗಳಾಗಿದ್ದಾರೆ ಎಂದು ತಿಳಿಸಿದ್ದಾರೆ.

---

ಪ್ರಧಾನಿ ನರೇಂದ್ರ ಮೋದಿ ಅವರು, ಆಕಾಶವಾಣಿ ಮೂಲಕ ಮಾಡಿದ ಮನ್ ಕಿ ಬಾತ್ ಭಾಷಣದಲ್ಲಿ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಪಿಎಂ-ಸ್ವನಿಧಿ ಫಲಾನುಭವಿಗಳಲ್ಲಿ ಸುಮಾರು ಶೇಕಡ ೪៦ರಷ್ಟು ಮಹಿಳೆಯರೇ ಇದ್ದಾರೆ. ದೇಶಾದ್ಯಂತ ಸುಮಾರು ೩೫ ಲಕ್ಷ ಮಹಿಳೆಯರು ಈ ಯೋಜನೆಯಡಿ ನೆರವು ಪಡೆದು ತಮ್ಮ ವ್ಯಾಪಾರವನ್ನು ವಿಸ್ತರಿಸಿಕೊಳ್ಳುತ್ತಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

ಬೆಂಗಳೂರಿನ ಟಿ.ಎಸ್.ನಿಂಗಮ್ಮ ಅವರ ಉದಾಹರಣೆ ಕೂಡ ಸ್ಫೂರ್ತಿದಾಯಕವಾಗಿದೆ. ನಿಂಗಮ್ಮ ಪತಿಯ ಜೊತೆಗೂಡಿ ಇಡ್ಲಿ, ದೋಸೆ ಮತ್ತು ಸಾಂಬರ್ ಮಾರಾಟ ಮಾಡುವ ಸಣ್ಣ ಕೆಲಸ ಆರಂಭಿಸಿದರು. ವ್ಯಾಪಾರ ಬೆಳೆಸಲು ಆ ಸಂದರ್ಭದಲ್ಲಿ ಹಣದ ಅಗತ್ಯವಿತ್ತು.

ಅವರು ಪಿಎಂ-ಸ್ವನಿಧಿ ಮೂಲಕ ಬೆಂಬಲ ಪಡೆದು ತಳ್ಳುವ ಗಾಡಿಯನ್ನು ಉತ್ತಮಪಡಿಸಿಕೊಂಡು ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸಿಕೊಂಡಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ನಿಂಗಮ್ಮ ಪಿಎಂ ಸ್ವನಿಧಿ ನೆರವಿನಿಂದ ಸ್ವಾವಲಂಬಿಯಾದ ಬಗ್ಗೆ ತಮ್ಮ ಅನಿಸಿಕೆಗಳನ್ನು ಹಂಚಿಕೊಂಡಿದ್ದಾರೆ.

ಪ್ರಧಾನಮಂತ್ರಿಯವರು ಮನದ ಮಾತಿನಲ್ಲಿ ಚಿಕ್ಕಮಗಳೂರಿನ ರೈತರು ಕೈಗೊಂಡಿರುವ ಕಾಫಿ ತೋಟದ ಮಧ್ಯ ಅವಕಾಡೊ ಕೃಷಿ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿರುವ ಬಗ್ಗೆ ಕೃಷಿಕ ಗುರುವೇಶ್ ಸಂತೋಷ ವ್ಯಕ್ತಪಡಿಸಿದ್ದಾರೆ.

---

ಬಿ.ನಾಗೇಂದ್ರ ಸಚಿವ ಸ್ಥಾನಕ್ಕೆ ಸಲ್ಲಿಸಿದ ರಾಜೀನಾಮೆಯನ್ನು ರಾಜೀನಾಮೆಯನ್ನು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಂಗೀಕರಿಸಿದ್ದಾರೆ ಎಂದು ಅಧಿಕೃತ ಅಧಿಸೂಚನೆ ತಿಳಿಸಿದೆ.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಶಿಫಾರಸ್ಸಿನ ಮೇರೆಗೆ ರಾಜ್ಯಪಾಲರು ರಾಜೀನಾಮೆಯನ್ನು ಅಂಗೀಕರಿಸಿದ್ದಾರೆ.

ಯೋಜನೆ ಮತ್ತು ಸಾಂಖ್ಯಿಕ ಸಚಿವ ಬಿ.ನಾಗೇಂದ್ರ ಸಚಿವ ಸಂಪುಟಕ್ಕೆ ಸಲ್ಲಿಸಿರುವ ರಾಜೀನಾಮೆಯನ್ನು ಸಂವಿಧಾನದ ೧೬೪-೧ನೇ ವಿಧಿಯಡಿಯಲ್ಲಿ ರಾಜ್ಯಪಾಲರಿಗೆ ದತ್ತವಾಗಿರುವ ಅಧಿಕಾರದ ಮೂಲಕ ತಕ್ಷಣದಿಂದ ಜಾರಿಗೆ ಬರುವಂತೆ ಅಂಗೀಕರಿಸಲಾಗಿದೆ ಎಂದು ಅಧಿಸೂಚನೆಯಲ್ಲಿ ತಿಳಿಸಲಾಗಿದೆ.

---

ರಾಜ್ಯದಲ್ಲಿ ಅಧಿಕಾರದಲ್ಲಿರುವ ಕಾಂಗ್ರೆಸ್ ನೇತೃತ್ವದ ಸರ್ಕಾರಕ್ಕೆ ಕರ್ನಾಟಕ ಲೋಕಸೇವಾ ಆಯೋಗವನ್ನು ಭ್ರಷ್ಟಾಚಾರ ಮುಕ್ತಗೊಳಿಸುವ ಮನಸ್ಸು ಮತ್ತು ಇಚ್ಛಾಶಕ್ತಿ ಇಲ್ಲ ಎಂದು ಹಿರಿಯ ಜೆಡಿಎಸ್ ನಾಯಕ ಹಾಗೂ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗ್ರಾಮೀಣ ಕುಡಿಯುವ ನೀರು ಇಲಾಖೆಯ ಸಹಾಯಕ ಕಾರ್ಯಪಾಲನಾ ಅಭಿಯಂತರರ ನೇಮಕಾತಿಯಲ್ಲಿ ಹಾಗೂ ಪಶುವೈದ್ಯಕೀಯ ಪರೀಕ್ಷೆಯಲ್ಲಿಯೂ ಅಕ್ರಮವಾಗಿರುವುದು ವರದಿಯಾಗಿದೆ.

ರಾಜ್ಯದಲ್ಲಿ ನಿರುದ್ಯೋಗ ಹೆಚ್ಚಾಗುತ್ತಿದ್ದು, ಜವಾಬ್ದಾರಿ ಸ್ಥಾನದಲ್ಲಿರುವ ಸರ್ಕಾರ ಮತ್ತು ಕೆಪಿಎಸ್‌ಸಿ ಎರಡೂ ಕೂಡ ಅಕ್ರಮದಲ್ಲಿ ಭಾಗಿಯಾಗಿವೆ ಎಂದು ಅವರು ಟೀಕಿಸಿದ್ದಾರೆ.

---

ಕೆಪಿಎಸ್‌ಸಿ ಪರೀಕ್ಷೆ ಮತ್ತು ನೇಮಕಾತಿ ಹಗರಣ ಹಾಗೂ ಮೀಸಲಾತಿ ವಿಚಾರದಲ್ಲಿ ಪರಿಶಿಷ್ಟರಿಗೆ ಆಗಿರುವ ಅನ್ಯಾಯಕ್ಕೆ ಪರಿಹಾರ ಸೇರಿದಂತೆ ವಿವಿಧ ವಿಚಾರಗಳನ್ನು ಮುಂದಿಟ್ಟುಕೊಂಡು ಬಿಜೆಪಿ ಸೆಪ್ಟೆಂಬರ್ ೧ ರಿಂದ ಲಿಂಗಸುಗೂರಿನಿಂದ ಪಾದಯಾತ್ರೆ ಆರಂಭಿಸಲಿದೆ ಎಂದು ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಾಲ್ಮೀಕಿ ಅಭಿವೃದ್ಧಿ ನಿಗಮದ ದುರ್ಬಳಕೆಯಾದ ಹಣ ವಾಪಸ್ಸಾಗಬೇಕು, ಸರ್ಕಾರ ನೀಡಿದ ಭರವಸೆಯಂತೆ ಎರಡೂವರೆ ಲಕ್ಷ ಯುವಜನರಿಗೆ ಉದ್ಯೋಗ ನೀಡಬೇಕು, ಉತ್ತರ ಕರ್ನಾಟಕದ ಅಭಿವೃದ್ಧಿಗೆ ಕ್ರಮ ಕೈಗೊಳ್ಳಬೇಕು ಮೊದಲಾದ ವಿಚಾರಗಳನ್ನು ಮುಂದಿಟ್ಟುಕೊಂಡು ಈ ಪಾದಯಾತ್ರೆ ನಡೆಸಲಾಗುತ್ತಿದೆ ಎಂದು ವಿಜಯೇಂದ್ರ ಮಾಹಿತಿ ನೀಡಿದ್ದಾರೆ.

---

ವಿಶ್ವವಿಖ್ಯಾತ ಮೈಸೂರು ದಸರಾ ಸಿದ್ಧತೆಗಳು ಆರಂಭವಾಗಿದ್ದು, ಮೊದಲ ಹಂತದಲ್ಲಿ ಆಗಮಿಸಿರುವ ಗಜಪಡೆಯ ೯ ಆನೆಗಳಿಗೆ ಇಂದು ಅರಣ್ಯ ಇಲಾಖೆ ಅಧಿಕಾರಿಗಳ ನೇತೃತ್ವದಲ್ಲಿ ತೂಕ ಪರೀಕ್ಷೆ ನಡೆಸಲಾಯಿತು.

ದಸರಾಗೆ ಆಗಮಿಸಿರುವ ೯ ಆನೆಗಳ ಪೈಕಿ ಇಂದು ನಡೆಸಿದ ಮಾಪನದಂತೆ ಶ್ರೀಕಂಠ ಆನೆ ೫ ಸಾವಿರದ ೬೯೦ ಕೆ.ಜಿ. ತೂಕದೊಂದಿಗೆ ಅತಿ ಹೆಚ್ಚು ತೂಕ ಹೊಂದಿರುವ ಆನೆಯಾಗಿದೆ.

ಉಳಿದಂತೆ ಮಹೇಂದ್ರ - ೫ ಸಾವಿರದ ೪೯೦ ಕೆ.ಜಿ., ಲಕ್ಷ್ಮೀ - ೩ ಸಾವಿರದ ೯೯೦ ಕೆ.ಜಿ., ಪ್ರಶಾಂತ - ೫ ಸಾವಿರದ ೨೦೫ ಕೆ.ಜಿ., ಧನಂಜಯ - ೫ ಸಾವಿರದ ೫೩೦ ಕೆ.ಜಿ., ಶ್ರೀರಾಮ - ೪ ಸಾವಿರದ ೮೨೦ ಕೆ.ಜಿ., ಕಾವೇರಿ - ೩ ಸಾವಿರದ ೬೫ ಕೆ.ಜಿ., ಏಕಲವ್ಯ - ೫ ಸಾವಿರದ ೬೦೦ ಕೆ.ಜಿ ಮತ್ತು ಗೋಪಿ - ೫ ಸಾವಿರದ ೧೬೦ ಕೆ.ಜಿ. ತೂಕ ಹೊಂದಿವೆ.

ಆನೆಗಳ ತೂಕ ಪರೀಕ್ಷೆಯ ಬಳಿಕ ಮಾತನಾಡಿದ ಉಪ ಅರಣ್ಯ ಸಂರಕ್ಷಣಾಧಿಕಾರಿ ಪ್ರಭುಗೌಡ ಮಾಹಿತಿ ನೀಡಿದರು.

---

ಇನ್ನು, ಹವಾವರ್ತಮಾನ,

ರಾಜ್ಯದ ಕರಾವಳಿಯ ಬಹುತೇಕ ಎಲ್ಲೆಡೆ, ದಕ್ಷಿಣ ಒಳನಾಡಿನ ಕೆಲವೆಡೆ ಹಾಗೂ ಉತ್ತರ ಒಳನಾಡಿನ ಒಂದೆರಡು ಸ್ಥಳಗಳಲ್ಲಿ ಮಳೆಯಾಗಿದೆ.

ಮುಂದಿನ ೨೪ ಗಂಟೆಗಳ ಕಾಲ ಬೆಂಗಳೂರು ಸುತ್ತಮುತ್ತ ಮೋಡಕವಿದ ವಾತಾವರಣವಿರಲಿದ್ದು, ಒಂದೆರಡು ಬಾರಿ ಮಳೆಯಾಗುವ ನಿರೀಕ್ಷೆಯಿದೆ.

ಗರಿಷ್ಠ ತಾಪಮಾನ ೨೯ ಹಾಗೂ ಕನಿಷ್ಠ ೨೦ ಡಿಗ್ರಿ ಸೆಲ್ಸಿಯಸ್ ಇರುವ ಸಾಧ್ಯತೆ.

__________ ಮುಕ್ತಾಯ ___________